Vijay Karnataka Pg-7 07-12

### ಇಂದು ಸಂಪುಟದಲ್ಲಿ ನಿರ್ಧಾರ ಸಾಧ್ಯತೆ

# ಮೈಸೂರು ಮಿನರಲ್ಸ್ ಗುತ್ತಿಗೆ ಅಕ್ರಮ: ತಪ್ಪಿತಸ್ಥರ ವಿರುದ್ಧ ಕ್ರಮ

■ **ವಿಕ ಸುದ್ದಿಲೋಕ** ಬೆಂಗಳೂರು

ಸರಕಾರಿ ಸ್ವಾಮ್ಯದ ಮೈಸೂರು ಮಿನರಲ್ಸ್‌ನ ಗಣಿ ಮರುಗುತ್ತಿಗೆ ಅಕ್ರಮಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ವರದಿಯ ಶಿಫಾರಸು ಮತ್ತೆ ಸದ್ದು ಮಾಡಿದ್ದು, ಅಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಹೆಸರಿಸಲಾದ ಹಿರಿಯ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಪ್ರಸ್ತಾವನೆ ಬುಧವಾರ ಸಚಿವ ಸಂಪುಟದ ಮುಂದೆ ಚರ್ಚೆಗೆ ಬರುತ್ತಿದೆ.

ಮರುಗುತ್ತಿಗೆ ಒಪ್ಪಂದಗಳ ಮೂಲಕ ರಾಜ್ಯದ ಬೊಕ್ಕಸಕ್ಕೆ ವಾರ್ಷಿಕ 6,500 ಕೋಟಿ ರೂ. ನಷ್ಟಕ್ಕೆ ಕಾರಣವಾಗಿದೆ ಎಂದು ಅಕ್ರಮ ಗಣಿಗಾರಿಕೆ ಸಂಬಂಧ ಲೋಕಾಯುಕ್ತ ವರದಿಯಲ್ಲಿ ಹೇಳಲಾಗಿದ್ದು, ಕಾರಣರಾದ ಹಿರಿಯ ಅಧಿಕಾರಿಗಳ ಹೆಸರನ್ನು ವರದಿಯಲ್ಲಿ ಪಟ್ಟಿ ಮಾಡಲಾಗಿತ್ತು. ಈ ಅಕ್ರಮದಲ್ಲಿ ಅಧಿಕಾರಿಗಳು ಹಾಗೂ ರಾಜಕಾರಣಿಗಳು ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ.

ಇಂಧನ ಸಚಿವ ಡಿ.ಕೆ.ಶಿವಕುಮಾರ್ ಇತ್ತೀಚಿನ ವಿದೇಶ ಪ್ರವಾಸ ಬಳಿಕ ಸಿದ್ಧಪಡಿಸಿರುವ ವಿನೂತನ 'ರನ್ ಆಫ್ ದಿ ರಿವರ್' ಕಲ್ಪನೆಯಡಿ ಕೆಪಿಸಿಎಲ್ ಮೂಲಕ ಶಿವನಸಮುದ್ರದಲ್ಲಿ 100 ಮೆ.ವ್ಯಾ.ಸಾಮರ್ಥ್ಯದ ಎರಡು ವಿದ್ಯುತ್ ಉತ್ಪಾದನಾ ಸ್ಥಾವರಗಳನ್ನು ಸ್ಥಾಪಿಸುವ ಪ್ರಸ್ತಾವವೂ ಸಂಪುಟದ ಅನುಮೋದನೆಗೆ ಬರುತ್ತಿದೆ.

**ಕಾಗದ ಕಾರ್ಖಾನೆಗೆ ಬೀಗ**

ಭದ್ರಾವತಿಯ ಮೈಸೂರು ಕಾಗದ ಕಾರ್ಖಾನೆ ಪುನಶ್ಚೇತನ ಪ್ರಸ್ತಾವವನ್ನು ಸರಕಾರ ಸಂಪೂರ್ಣ ಕೈಬಿಟ್ಟಿದೆ. ಕಾರ್ಖಾನೆಯ ನೌಕರರಿಗೆ ಸ್ವಯಂ ನಿವೃತ್ತಿ ಯೋಜನೆ ಜಾರಿಗೊಳಿಸುವ ಪ್ರಸ್ತಾವನೆಯೂ ಸಮ್ಮತಿಗಾಗಿ ಸಂಪುಟದ ಮುಂದೆ ಬರುತ್ತಿದೆ. ಮುಖ್ಯವಾಗಿ, ಬೆಂಗಳೂರಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಆವರಣದಲ್ಲಿ 'ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ' ಹೆಸರಿನಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವ ತೀರ್ಮಾನಕ್ಕೂ ಬುಧವಾರದ ಸಂಪುಟ ಸಭೆ ಅನುಮೋದನೆ ನೀಡುವ ನಿರೀಕ್ಷೆಯಿದೆ.

---

ಉದಯವಾಣಿ 7/12/16

# ಶಿವನಸಮುದ್ರ ವಿದ್ಯುತ್ ಘಟಕಕ್ಕೆ ಇಂದು ಸಮ್ಮತಿ?

### ■ ಸಂಪುಟ ಸಭೆಯಲ್ಲಿ ಇಂದು ನಿರ್ಧಾರ ಸಂಭವ

**ಬೆಂಗಳೂರು:** ಶಿವನಸಮುದ್ರದಲ್ಲಿ 100 ಮೆಗಾವ್ಯಾಟ್ ಸಾಮರ್ಥ್ಯದ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪಿಸುವ ಯೋಜನೆ ಸಂಬಂಧ ಬುಧವಾರ ನಡೆಯಲಿರುವ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆಯಿದೆ.

ಕರ್ನಾಟಕ ವಿದ್ಯುತ್ ನಿಗಮದ ವತಿಯಿಂದ 100 ಮೆಗಾವ್ಯಾಟ್ ಸಾಮರ್ಥ್ಯದ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪಿಸುವ ಪ್ರಸ್ತಾವನೆ ಕುರಿತು ಸಂಪುಟ ಸಭೆಯಲ್ಲಿ ಚರ್ಚೆಗೆ ಬರಲಿದೆ.

ಅದೇ ರೀತಿ ಬೆಂಗಳೂರಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಆವರಣದಲ್ಲಿ 'ಬೌರಿಂಗ್ ಮತ್ತು ಲೇಡಿ ಕರ್ಜನ್ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ' ಎಂಬ ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸುವ ಬಗ್ಗೆಯೂ ಸಂಪುಟ ತೀರ್ಮಾನ ಕೈಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ.

ಉಳಿದಂತೆ, ಮೈಸೂರು ಮಿನರಲ್ಸ್‌ನಲ್ಲಿ ನಡೆದಿರುವ ಅಕ್ರಮಗಳ ಕುರಿತು ಸಲ್ಲಿಕೆಯಾಗಿರುವ ಲೋಕಾಯುಕ್ತ ವರದಿ ಆಧಾರದಲ್ಲಿ ಮುಂದೆ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ನಿರ್ಧರಿಸುವುದು. ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆಗೆ ತಿದ್ದುಪಡಿ ಪ್ರಸ್ತಾವನೆ, ಭದ್ರಾವತಿಯ ಮೈಸೂರು ಕಾಗದ ಕಾರ್ಖಾನೆ ನೌಕರರಿಗೆ ಸ್ವಯಂ ನಿವೃತ್ತಿ ಯೋಜನೆ ಜಾರಿ ಮತ್ತಿತರ ವಿಷಯಗಳು ಸಂಪುಟದಲ್ಲಿ ಚರ್ಚೆಯಾಗಲಿವೆ ಎಂದು ಹೇಳಲಾಗಿದೆ.